# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 119 |
| ಸದಸ್ಯರ ಹೆಸರು | : | ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 16-02-2022 |
| ಉತ್ತರಿಸುವ ಸಚಿವರು | : | ಮಾನ್ಯ ಲೋಕೋಪಯೋಗಿ ಸಚಿವರು |

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ಬೆಂಗಳೂರು ಮತ್ತು ಕನಕಪುರ ರಾಷ್ಟ್ರೀಯ ಹೆದ್ದಾರಿ ಸಂಖ್ಯೆ-209ರ ನಡುವಿನ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳು ಪೂರ್ಣಗೊಳ್ಳಲು ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು; (ವಿವರ ನೀಡುವುದು); | ಬೆಂಗಳೂರು ಮತ್ತು ಕನಕಪುರ ರಾಷ್ಟ್ರೀಯ ಹೆದ್ದಾರಿ ಸಂಖ್ಯೆ-209ರ ನಡುವಿನ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಯು ಗುತ್ತಿಗೆದಾರರ ಅರ್ಥಿಕ ಮುಗ್ಗಟ್ಟಿನಿಂದಾಗಿ ಹಾಗೂ ಫೆಬ್ರವರಿ-2020 ರಿಂದ ಕೋವಿಡ್-19ರ ಸಾಂಕ್ರಾಮಿಕದಿಂದಾಗಿ ಕಾಮಗಾರಿಯನ್ನು ಕೈಗೊಳ್ಳದೆ ಸ್ಥಗಿತಗೊಳಿಸಿರುತ್ತಾರೆ. ಈ ಬಗ್ಗೆ ಗುತ್ತಿಗೆದಾರರ ಮತ್ತು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ನಡುವೆ ಹಲವಾರು ಸಭೆಗಳನ್ನು ನಡೆಸಲಾಗಿರುತ್ತದೆ. ಆದರೆ ಗುತ್ತಿಗೆದಾರರು ಕಾಮಗಾರಿಯನ್ನು ಪುನರಾರಂಭಿಸಿರುವುದಿಲ್ಲ. ಆದುದರಿಂದ ಗುತ್ತಿಗೆದಾರರೊಂದಿಗಿನ ಗುತ್ತಿಗೆ ಕರಾರನ್ನು ಮುಕ್ತಾಯಗೊಳಿಸುವ (Termination) ಪ್ರಕ್ರಿಯೆಯಲ್ಲಿದೆ |
| ಆ | ಈ ಹೆದ್ದಾರಿ ಕಾಮಗಾರಿಗಳಿಂದ ರಸ್ತೆಯು ಸಂಪೂರ್ಣ ಹದಗೆಟ್ಟು ಸಾರ್ವಜನಿಕರಿಗೆ ಓಡಾಡಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಯಾವ ಕಾಲಮಿತಿಯೊಳಗೆ ಈ ಹೆದ್ದಾರಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ಮತ್ತು ಇದಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು) | ಬೆಂಗಳೂರು ಮತ್ತು ಕನಕಪುರ ರಾಷ್ಟ್ರೀಯ ಹೆದ್ದಾರಿ ಸಂಖ್ಯೆ-209ರ ನಡುವಿನ ರಾಷ್ಟ್ರೀಯ ಹೆದ್ದಾರಿ ನಿರ್ವಹಣಾ ಕಾಮಗಾರಿಗೆ ರೂ.7.83 ಕೋಟಿಗಳ ಮೊತ್ತಕ್ಕೆ ಮೆ:ಗಣಪತಿ ಸ್ಟೋನ್ ಕ್ರಷರ್ಸ್ ಪ್ರೈ.ಲಿ ಇವರಿಗೆ ವಹಿಸಲಾಗಿರುತ್ತದೆ. ದಿ:02-02-2022 ರಿಂದ ನೈಸ್ ರಸ್ತೆ ಜಂಕ್ಷನ್ ಯಿಂದ ಕಾಮಗಾರಿ ಪ್ರಾರಂಭಗೊಂಡಿದೆ ಈ ತಿಂಗಳ ಅಂತ್ಯದೊಳಗೆ ನಿರ್ವಹಣೆ ಕಾಮಗಾರಿಯನ್ನು ಪೂರ್ಣಗೊಳಿಸಲು ಹಾಗೂ ಬೆಂಗಳೂರು ನೈಸ್ ರಸ್ತೆಯಿಂದ ಕನಕಪುರವರೆಗಿನ ರಸ್ತೆಯು ಸುಸ್ಥಿತಿಯಲ್ಲಿಡಲು ಯೋಜಿಸಲಾಗಿರುತ್ತದೆ.<br><br>ಪ್ರಸ್ತುತ ಬೇರೆ ಏಜೆನ್ಸಿಯವರೊಂದಿಗೆ Harmonious Substitution ಅಥವಾ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಮಾರ್ಗಸೂಚಿಗಳನ್ವಯ ಹೊಸದಾಗಿ ಟೆಂಡರ್ ಕರೆಯುವ ಮೂಲಕ ಕಾಮಗಾರಿ ತೆಗೆದುಕೊಳ್ಳಲಾಗುವುದು. |

ಕಡತ ಸಂಖ್ಯೆ: ಲೋಇ 37 ಸಿಎನ್‌ಹೆಚ್ 2022 (ಇ)

(ಸಿ.ಸಿ. ಪಾಟೀಲ)
ಲೋಕೋಪಯೋಗಿ ಸಚಿವರು